**All India Radio: Bangalore**
**National Bulletins In Kannada**
**30.05.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

**೧. ಉತ್ತರಪ್ರದೇಶದ ಕಾನ್ಪುರದಲ್ಲಿ ೪೭ ಸಾವಿರದ ೫೭೩ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ಚಾಲನೆ**

**೨. ಜಮ್ಮು-ಕಾಶ್ಮೀರದ ಗಡಿಯಲ್ಲಿ ಪಾಕಿಸ್ತಾನದ ಶೆಲ್ ದಾಳಿಯಿಂದ ಸಂತ್ರಸ್ತರಾದವರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಿದ ಕೇಂದ್ರ ಸರ್ಕಾರ**

**೩. ಒಂದೇ ಪಾಳಿಯಲ್ಲಿ ನೀಟ್-ಪಿಜಿ ಪರೀಕ್ಷೆ ನಡೆಸುವಂತೆ ಸುಪ್ರೀಂಕೋರ್ಟ್ ಆದೇಶ**

**೪. ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ಭಾರತಕ್ಕೆ ಇಂದು ಮೂರು ಚಿನ್ನ; ಅಂಕಪಟ್ಟಿಯಲ್ಲಿ ಎರಡನೇ ಸ್ಥಾನ**

**೫. ಐಪಿಎಲ್ ಟಿ-೨೦ ಕ್ರಿಕೆಟ್; ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಬ್ಯಾಟಿಂಗ್ ಆಯ್ಕೆ**

**<><*<><>*><>**

ಉತ್ತರಪ್ರದೇಶದ ಕಾನ್ಪುರದಲ್ಲಿಂದು ೪೭ ಸಾವಿರದ ೫೭೩ ಕೋಟಿ ರೂಪಾಯಿ ಮೌಲ್ಯದ ೧೫ ಬೃಹತ್ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಅವರು, ಚುನ್ನಿಗಂಜ್ ಮತ್ತು ನಯಾಗಂಜ್ ನಡುವಿನ ಕಾನ್ಪುರ ಮೆಟ್ರೋದ ನೂತನ ಮಾರ್ಗಕ್ಕೆ ಹಸಿರು ನಿಶಾನೆ ತೋರಿಸಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಆಪರೇಷನ್ ಸಿಂದೂರ ರೂಪದಲ್ಲಿ ಹೆಣ್ಣುಮಕ್ಕಳ ಕೋಪ ಮತ್ತು ನೋವನ್ನು ಇಡೀ ಜಗತ್ತು ಕಂಡಿದೆ. ಪಾಕಿಸ್ತಾನದಲ್ಲಿನ ಹಲವು ಭಯೋತ್ಪಾದಕ ಕೇಂದ್ರಗಳನ್ನು ಭಾರತ ಸಂಪೂರ್ಣವಾಗಿ ನಾಶಪಡಿಸಿದೆ. ಆಪರೇಷನ್ ಸಿಂದೂರ ರಕ್ಷಣಾ ಕಾರ್ಯಾಚರಣೆ ಇನ್ನೂ ಪೂರ್ಣಗೊಂಡಿಲ್ಲ ಎಂದರು. ನಮ್ಮ ಸಶಸ್ತ್ರ ಪಡೆಗಳು ಶೌರ್ಯ ಮತ್ತು ಧೈರ್ಯವೇ ಪಾಕಿಸ್ತಾನವನ್ನು ಕದನ ವಿರಾಮಕ್ಕೆ ಬೇಡಿಕೊಳ್ಳುವಂತೆ ಮಾಡಿತು ಎಂದು ಅವರು ಹೇಳಿದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಬಿಹಾರದ ಕರಕಟ್‌ನಲ್ಲಿಂದು

೪೮ ಸಾವಿರದ ೫೨೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಿದರು. ಈ ವೇಳೆ ಮಾತನಾಡಿದ ಅವರು, ಭಾರತದ ಭಯೋತ್ಪಾದನಾ ವಿರೋಧಿ ನೀತಿ ಮತ್ತು ಹೋರಾಟವು ಅಚಲ ಮತ್ತು ನಿರಂತರವಾಗಿರಲಿದೆ. ಭಯೋತ್ಪಾದನೆ ಅಥವಾ ನಕ್ಸಲವಾದ ಎರಡರ ವಿರುದ್ಧ ತ್ವರಿತ ಮತ್ತು ನಿಖರ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ಇದೇ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸುಮಾರು ೫ ಸಾವಿರದ ೫೦೦ ಕೋಟಿ ರೂಪಾಯಿ ಮೌಲ್ಯದ ಚತುಷ್ಪಥ ಪಟ್ನಾ-ಗಯಾ-ದೊಭಿ ಹೆದ್ದಾರಿ ಮತ್ತು ೨೪೯ ಕೋಟಿ ರೂಪಾಯಿ ಮೌಲ್ಯದ ಗೋಪಾಲ್ಗಂಜ್ ನಗರದ ರಾಷ್ಟ್ರೀಯ ಹೆದ್ದಾರಿ-೨೭ರಲ್ಲಿ ನಿರ್ಮಿತ ಹೆದ್ದಾರಿಯ ಭಾಗವನ್ನು ಉದ್ಘಾಟಿಸಿದರು. ಅಲ್ಲದೆ, ಸುಮಾರು ೧ ಸಾವಿರದ ೩೩೦ ಕೋಟಿ ರೂಪಾಯಿ ವೆಚ್ಚದಲ್ಲಿ ಸೋನ್ ನಗರ್ ಮತ್ತು ಮೊಹಮ್ಮದ್ ಗಂಜ್ ನಡುವೆ ನಿರ್ಮಿಸಲಾಗಿರುವ ಮೂರನೇ ರೈಲು ಮಾರ್ಗವನ್ನು ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರಕ್ಕೆ ಸಮರ್ಪಿಸಿದರು.

<><*<><>*><>

ಪಾಕಿಸ್ತಾನದ ಶೆಲ್ ದಾಳಿಯಿಂದ ಸಂತ್ರಸ್ತರಾದ ಜಮ್ಮು-ಕಾಶ್ಮೀರದ ಗಡಿ ನಿಯಂತ್ರಣ ರೇಖೆ ಸಮೀಪದ ನಿವಾಸಿಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಿದ್ದಾರೆ. ಅಸ್ತಿತ್ವದಲ್ಲಿರುವ ೯೦ ಸಾವಿರ ಭೂಗತ ಬಂಕರ್‌ಗಳ ಜೊತೆಗೆ ಹೆಚ್ಚುವರಿ ಬಂಕರ್‌ಗಳನ್ನು ನಿರ್ಮಿಸಲು ಹಾಗೂ ಗಡಿ ಭಾಗದ ಜನರ ಸುರಕ್ಷತೆಗಾಗಿ ಹೆಚ್ಚುವರಿ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ಎಂದು ಅವರು ತಿಳಿಸಿದರು. ಪಾಕಿಸ್ತಾನ ನಡೆಸಿದ ಶೆಲ್ ದಾಳಿಯಿಂದ ಮೃತಪಟ್ಟ ಕುಟುಂಬಗಳ ಸದಸ್ಯರಿಗೆ ನೇಮಕಾತಿ ಪತ್ರ ವಿತರಿಸಿ ಮಾತನಾಡಿದ ಸಚಿವ ಅಮಿತ್ ಶಾ, ಕೇಂದ್ರ ಸರ್ಕಾರವು ಸಂತ್ರಸ್ತ ಕುಟುಂಬಗಳಿಗೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡಲಿದೆ ಎಂದು ಹೇಳಿದರು. ಕಾಶ್ಮೀರದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿದ್ದು, ಇದೇ ರೀತಿಯಲ್ಲಿ ಮುಂದುವರಿಯಲಿದೆ. ಯಾರಿಂದಲೂ ಅಭಿವೃದ್ಧಿಯನ್ನು ತಡೆಯಲು ಸಾಧ್ಯವಿಲ್ಲ. ಕಾಶ್ಮೀರದ ನೆಲದಿಂದ ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವ ಕೆಲಸವನ್ನು ಭದ್ರತಾ ಪಡೆಗಳು ಮುಂದುವರಿಸಲಿವೆ ಎಂದು ಸಚಿವ ಅಮಿತ್ ಶಾ ತಿಳಿಸಿದರು.

<><*<><>*><>

ಭಾರತದ ಸರ್ವಪಕ್ಷಗಳ ನಿಯೋಗವು ಸೌದಿ ಅರೇಬಿಯಾದಲ್ಲಿ ರಾಜತಾಂತ್ರಿಕ ಭೇಟಿ ಪೂರ್ಣಗೊಳಿಸಿತು. ಬಿಜೆಪಿ ಸಂಸದ ಬೈಜಯಂತ್ ಪಾಂಡಾ ನೇತೃತ್ವದಲ್ಲಿ ನಡೆದ ಮೂರು ದಿನಗಳ ಭೇಟಿಯಲ್ಲಿ, ಭಾರತವು ಭಯೋತ್ಪಾದನೆ ವಿರುದ್ಧ ತನ್ನ ದೃಢ ನಿಲುವನ್ನು ಪ್ರದರ್ಶಿಸಿತು. ಪಹಲ್ಗಾಮ್ ದಾಳಿಗೆ ಪ್ರತಿಕ್ರಿಯೆವಾಗಿ ಭಾರತ ನಡೆಸಿದ 'ಆಪರೇಷನ್ ಸಿಂದೂರ' ಕುರಿತು ಚರ್ಚೆ ನಡೆಯಿತು. ಭಾರತದ ಪ್ರತಿನಿಧಿಗಳು ಸೌದಿ ಚಿಂತನಾ ಕೇಂದ್ರದ ಡಾ.ಅಬ್ದುಲ್ ಅಝೀಜ್, ನೈಫ್ ವಿಶ್ವವಿದ್ಯಾಲಯದ ಡಾ. ಅಬ್ದುಲ್ ಮಜೀದ್ ಅಲ್ಬನಿಯನ್ ಜೊತೆ ಭಯೋತ್ಪಾದನೆ ವಿರುದ್ಧ ತಂತ್ರಜ್ಞಾನ ಬೆಂಬಲ ಕುರಿತು ಚರ್ಚಿಸಿದರು.

<><*<><>*><>

ಕೃತಕಬುದ್ಧಿಮತ್ತೆ ಕ್ಷೇತ್ರದಲ್ಲಿ ಭಾರತ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಕೇಂದ್ರ ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ 'ಇಂಡಿಯಾ ◌o| ಮಿಷನ್ - ಮೇಕ್ ◌o| ಇನ್ ಇಂಡಿಯಾ' ಮತ್ತು 'ಮೇಕ್ ◌o| ಫಾರ್ ಇಂಡಿಯಾ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

<><*<><>*><>

ವೈದ್ಯಕೀಯ ಸ್ನಾತಕೋತ್ತರ ಪದವಿ ಪ್ರವೇಶಕ್ಕಾಗಿ ಜೂನ್ ೧೫ ರಂದು ನಡೆಯಲಿರುವ ೨೦೨೫ರ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ- ನೀಟ್-ಪಿಜಿ ಎರಡು ಪಾಳಿಗಳಲ್ಲಿ ನಡೆಸುವ ಬದಲು ಒಂದೇ ಪಾಳಿಯಲ್ಲಿ ನಡೆಸುವಂತೆ ಸುಪ್ರೀಂ ಕೋರ್ಟ್ ಇಂದು ಆದೇಶಿಸಿದೆ. ನ್ಯಾಯಮೂರ್ತಿ ವಿಕ್ರಮ್ ನಾಥ್ ನೇತೃತ್ವದ ಪೀಠವು ಪರೀಕ್ಷೆಯನ್ನು ಒಂದೇ ಪಾಳಿಯಲ್ಲಿ ನಡೆಸಲು ವ್ಯವಸ್ಥೆ ಮಾಡುವಂತೆ ಮತ್ತು ಪ್ರಕ್ರಿಯೆಯ ಉದ್ದಕ್ಕೂ ಸಂಪೂರ್ಣ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿತು. ಎರಡು ಪಾಳಿಗಳಲ್ಲಿನ ಪ್ರಶ್ನೆ ಪತ್ರಿಕೆಗಳು ಎಂದಿಗೂ ಒಂದೇ ಸಾಮ್ಯತೆಯ ಕಷ್ಟದ ಮಟ್ಟದಲ್ಲಿರಲು ಸಾಧ್ಯವಿಲ್ಲ ಎಂದು ಪೀಠ ಗಮನಿಸಿತು. ನೀಟ್-ಪಿಜಿ ಪರೀಕ್ಷೆಯ ಪಾರದರ್ಶಕತೆಯ ಕೊರತೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯನ್ನು ನ್ಯಾಯಪೀಠ ನಡೆಸಿತು.

<><*<><>*><>

ಏಷ್ಯನ್ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ನ ಪುರುಷರ ೫ ಸಾವಿರ ಮೀಟರ್ ಓಟ ಸ್ಪರ್ಧೆಯಲ್ಲಿ ಭಾರತದ ಗುಲ್ವೀರ್ ಸಿಂಗ್ ಚಿನ್ನದ ಪದಕ ಗೆದ್ದಿದ್ದಾರೆ. ಇದಕ್ಕೂ ಮೊದಲು ಪುರುಷರ ೧೦ ಸಾವಿರ ಮೀಟರ್ ಓಟ ಸ್ಪರ್ಧೆಯಲ್ಲಿ ಅವರು ಚಿನ್ನದ ಪದಕ ವಿಜೇತರಾಗಿದ್ದರು. ಈ ಮೂಲಕ ಅವರು ೨

ಚಿನ್ನದ ಪದಕ ಗಳಿಸಿದ್ದಾರೆ. ಮಹಿಳೆಯರ ಹೈಜಂಪ್ ಸ್ಪರ್ಧೆಯಲ್ಲಿ ೧೮ ವರ್ಷದ ಪೂಜಾ ಅವರು ಚಿನ್ನದ ಪದಕ ವಿಜೇತರಾಗಿದ್ದಾರೆ.  ಮಹಿಳೆಯರ ಹೆಪ್ಟಾಥ್ಲಾನ್ ಸ್ಪರ್ಧೆಯಲ್ಲಿ ನಂದಿನಿ ಅಗಸಾರ ಚಿನ್ನದ ಪದಕ ಗೆದ್ದಿದ್ದಾರೆ. ಇದೇ ವೇಳೆ ಮಹಿಳೆಯರ ೩ ಸಾವಿರ ಮೀಟರ್ ಸ್ಟೀಪಲ್‌ಚೇಸ್ ಸ್ಪರ್ಧೆಯಲ್ಲಿ ಪಾರೂಲ್ ಚೌಧರಿ ಬೆಳ್ಳಿ ಪದಕ ವಿಜೇತರಾಗಿದ್ದಾರೆ.

**<><*<><>*><>**

ಪಂಜಾಬ್‌ನ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ಹಾಗೂ ಮುಂಬೈ ಇಂಡಿಯನ್ಸ್ ತಂಡಗಳು ಸೆಣಸುತ್ತಿವೆ.  ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<><>*><>**

೨೦೨೪-೨೫ನೇ ಹಣಕಾಸು ವರ್ಷದಲ್ಲಿ ದೇಶದ ನೈಜ ಜಿಡಿಪಿ ಶೇಕಡ ೬.೫ ರಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ೨೦೨೪-೨೫ನೇ ಹಣಕಾಸು ವರ್ಷದ ಕೊನೆಯ ತ್ರೈಮಾಸಿಕದಲ್ಲಿ, ನೈಜ ಜಿಡಿಪಿ ಶೇಕಡ ೭.೪ ರಷ್ಟು ದಾಖಲಾಗುವ ನಿರೀಕ್ಷೆಯಿದೆ.  ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಪ್ರಕಾರ, ೨೦೨೪-೨೫ನೇ ಹಣಕಾಸು ವರ್ಷದಲ್ಲಿ ನಾಮಿನಲ್ ಜಿಡಿಪಿ ಶೇಕಡ ೯.೮ ರಷ್ಟು ಬೆಳವಣಿಗೆ ದರವನ್ನು ಕಂಡಿದೆ.  ಕಳೆದ ಹಣಕಾಸು ವರ್ಷದಲ್ಲಿ ನಿರ್ಮಾಣ ವಲಯವು ಆರ್ಥಿಕತೆಯ ಪ್ರಮುಖ ಚಾಲಕವಾಗಿದ್ದು, ಶೇಕಡ ೯.೪ ರಷ್ಟು ಬೆಳವಣಿಗೆ ಅಂದಾಜಿಸಲಾಗಿದೆ. ೨೦೨೪-೨೫ನೇ ಹಣಕಾಸು ವರ್ಷದಲ್ಲಿ ಸಾರ್ವಜನಿಕ ಆಡಳಿತ, ರಕ್ಷಣೆ ಮತ್ತು ಇತರೆ ಸೇವಾ ವಲಯದ ಬೆಳವಣಿಗೆಯು ಶೇಕಡ ೮.೯ ರಷ್ಟು ಬೆಳವಣಿಗೆ ಕಂಡಿದೆ.

**<><*<><>*><>**

ಮುಂದಿನ ತಿಂಗಳು ಮುಂಬೈನಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್  ಕ್ರಿಯೇಟಿವ್ ಟೆಕ್ನಾಲಜಿಸ್‌ನ ತಾತ್ಕಾಲಿಕ ಕ್ಯಾಂಪಸ್ ತೆರಯಲಾಗುವುದು. ಕೆಲವೇ ವರ್ಷಗಲ್ಲಿ ಈ ಸಂಸ್ಥೆ ಸಂಪೂರ್ಣವಾಗಿ ಸ್ಥಾಪನೆಯಾಗಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಿಐಐ ವ್ಯವಹಾರ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಈ ತಿಂಗಳು ಮುಂಬೈನಲ್ಲಿ ನಡೆದ ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ಬಗ್ಗೆ  ಜಗತ್ತಿನ ವಿವಿಧ ರಾಷ್ಟ್ರಗಳಿಂದ ಅಗಾಧ ಉತ್ಸಾಹ

ಕಂಡುಬಂದಿದೆ. ವೇವ್ಸ್ ಬಜಾರ್‌ನ ಮೊದಲ ಆವೃತ್ತಿಯು ೧ ಸಾವಿರದ ೩೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವ್ಯವಹಾರ ಒಪ್ಪಂದಗಳು ಅಥವಾ ವಹಿವಾಟುಗಳನ್ನು ಸೃಷ್ಟಿಸಿದೆ ಎಂದು ಮಾಹಿತಿ ನೀಡಿದರು.

**<><*<><>*><>**

ಭಾರತೀಯ ನಾಗರಿಕರ ದೃಷ್ಟಿಕೋನವು ದೇಶದ ಕುರಿತು ಸಕಾರಾತ್ಮಕವಾಗಿ ಬದಲಾಗಿರುವುದರಿಂದ, ಇಡೀ ಜಗತ್ತು ಭಾರತವನ್ನು ನೋಡುವ ದೃಷ್ಟಿಯಲ್ಲಿ ತೀವ್ರವಾಗಿ ಬದಲಾವಣೆಯಾಗಿದೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಆಯೋಜಿಸಿದ್ದ ಸಿಐಐ ವ್ಯವಹಾರ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಭಾರತವು ಸಾಂಸ್ಕೃತಿಕವಾಗಿ ಮತ್ತು ಐತಿಹಾಸಿಕವಾಗಿ ಶ್ರೀಮಂತವಾಗಿದೆ ಮತ್ತು ಪ್ರಪಂಚದಾದ್ಯಂತದ ಜನರು ಜ್ಞಾನ ಮತ್ತು ಬುದ್ಧಿವಂತಿಕೆಯನ್ನು ಪಡೆಯಲು ಇಲ್ಲಿಗೆ ಬರುತ್ತಾರೆ ಎಂದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**